☎ Ph : 2768 3377

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.in

ಸಂ. ಬಿಐಎಎಪಿಎ/ಟಿಪಿ1/ಎಲ್‌ಎಒ/17/2013-14/146 ದಿನಾಂಕ: 3 APR 2018

**"ತಾತ್ಕಾಲಿಕ ಅನುಮೋದನೆ ಪತ್ರ"**

ವಿಷಯ : ಬೆಂಗಳೂರು ಜಿಲ್ಲೆ, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಹೆಸರಘಟ್ಟ ಹೋಬಳಿ, ಅದ್ದೆವಿಶ್ವನಾಥಪುರ ಗ್ರಾಮದ ಸರ್ವೆ ನಂ. 61/3 ರಲ್ಲಿ (3ಎ-16ಗು) ಮತ್ತು 61/4 ರಲ್ಲಿ (2ಎ) ಒಟ್ಟು 5ಎಕರೆ 16 ಗುಂಟೆ ವಿಸ್ತೀರ್ಣದ ಪ್ರದೇಶಕ್ಕೆ 'ವಸತಿ' ವಿನ್ಯಾಸಕ್ಕೆ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:
1) ಅರ್ಜಿದಾರರು ಸಲ್ಲಿಸಿರುವ ಅರ್ಜಿ ಸಂಖ್ಯೆ 2576 ದಿನಾಂಕ: 29-01-2014
2) ಈ ಪ್ರಾಧಿಕಾರದ ಪತ್ರ ಸಂಖ್ಯೆ: ಬಿಐಎಎಪಿಎ/ಟಿಪಿ3/ಭೂಉಬ/39/2012-13, ದಿನಾಂಕ: 30-05-2013 ಮತ್ತು ಬಿಐಎಎಪಿಎ/ಟಿಪಿ3/ಭೂಉಬ/40/2012-13/727 ದಿನಾಂಕ: 30-05-2013.
3) ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ:
   ಐ) ಎಎಲ್‌ಎನ್/(ಎನ್.ಎ)(ಹೆಚ್.ಎ)ಎಸ್.ಆರ್/42/2012-13, ದಿ: 20-06-2013
   ಒ) ಎಎಲ್‌ಎನ್/(ಎನ್.ಎ)(ಹೆಚ್.ಎ)ಎಸ್.ಆರ್/43/2012-13, ದಿ: 20-06-2013
4) ದಿನಾಂಕ: 20-02-2014 ರಂದು ನಡೆದ ಪ್ರಾಧಿಕಾರದ 99 ನೇ ಸಭೆಯ ವಿಷಯ ಸಂ. 99[3(15)] ರ ಬಗ್ಗೆ ಕೈಗೊಂಡ ನಿರ್ಣಯ.
5) ಈ ಪ್ರಾಧಿಕಾರದ ಸಮ ಸಂಖ್ಯೆಯ ಪತ್ರ ದಿನಾಂಕ: 15-03-2014.
6) ಅರ್ಜಿದಾರರು ದಿನಾಂಕ: 21-03-2014 ರ ಮನವಿ ಪತ್ರದೊಂದಿಗೆ ಆಕ್ಸಿಸ್ ಬ್ಯಾಂಕ್, ಮಾರತಹಳ್ಳಿ ಶಾಖೆ, ಇಲ್ಲಿನ ದಿನಾಂಕ: 06-03-2014 ರ ಡಿ.ಡಿ. ಸಂಖ್ಯೆ 086732ರಲ್ಲಿ ರೂ. 5,41,000-00 (ಐದು ಲಕ್ಷದ ನಲ್ವತ್ತೊಂದು ಸಾವಿರ ರೂಪಾಯಿಗಳು) ಮತ್ತು ಡಿ.ಡಿ..ಸಂಖ್ಯೆ: 087212 ರಲ್ಲಿ ರೂ.500 (ಐದು ನೂರು ರೂಪಾಯಿಗಳು) ಗಳನ್ನು ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ.
7) ಅರ್ಜಿದಾರರ ಮನವಿ ಪತ್ರ ದಿನಾಂಕ: 04-01-2018 ಮತ್ತು 27-03-2018.
8) ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 24 ಶಾಸನ 2015, ಬೆಂಗಳೂರು ದಿನಾಂಕ: 10-09-2015.

*********

ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀಮತಿ/ಶ್ರೀಯುತರುಗಳಾದ ಎನ್. ವೆಂಕಟಾಚಲಯ್ಯ ಬಿನ್ ಲೇಟ್॥ ಎನ್.ನಾರಾಯಣಪ್ಪ, ಆರ್.ವಿ. ಶ್ರೀನಿವಾಸಮೂರ್ತಿ, ಆರ್.ವಿ.ನಾರಾಯಣಸ್ವಾಮಿ, ಆರ್.ವಿ.ಆತ್ಮರಾಮಯ್ಯ, ಮತ್ತು ಆರ್.ವಿ.ಮಂಜುನಾಥ ಬಿನ್ ಎನ್. ವೆಂಕಟಾಚಲಯ್ಯ ಇವರು ಉಲ್ಲೇಖ (1) ರಲ್ಲಿ ಬೆಂಗಳೂರು ಜಿಲ್ಲೆ, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಹೆಸರಘಟ್ಟ ಹೋಬಳಿ, ಅದ್ದೆವಿಶ್ವನಾಥಪುರ ಗ್ರಾಮದ ಸರ್ವೆ ನಂ. 61/3 ರಲ್ಲಿ (03ಎ-16ಗು) ಮತ್ತು 61/4 ರಲ್ಲಿ (2ಎ) ಒಟ್ಟು 5ಎಕರೆ 16 ಗುಂಟೆ ವಿಸ್ತೀರ್ಣದ ಜಮೀನಿಗೆ ವಸತಿ ಬಡಾವಣೆ ನಕ್ಷೆಯನ್ನು ಅನುಮೋದಿಸಲು ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಸರ್ಕಾರದಿಂದ ಅನುಮೋದನೆಯಾಗಿರುವ ಮಹಾಯೋಜನೆ-2021 ರಂತೆ ಪ್ರಶ್ನಿತ ಜಮೀನುಗಳನ್ನು 'ಕೈಗಾರಿಕಾ ವಲಯ' ಕ್ಕೆ ಕಾಯ್ದಿರಿಸಲಾಗಿರುತ್ತದೆ. ಉಲ್ಲೇಖ (3) ರ ಪತ್ರಗಳಲ್ಲಿ "ಕೈಗಾರಿಕೆ ವಲಯ ದಿಂದ "ವಸತಿ ವಲಯ" ಕ್ಕೆ ಭೂ ಉಪಯೋಗ ಬದಲಾವಣೆಗೆ ಪರಿಗಣಿಸಿದ್ದು ಅದರಂತೆ ಕೈಗಾರಿಕೆ ವಲಯದಿಂದ ವಸತಿ ವಲಯಕ್ಕೆ ಭೂ ಉಪಯೋಗ ಬದಲಾವಣೆ ಆದೇಶವನ್ನು

ಹೊರಡಿಸಲಾಗಿರುತ್ತದೆ. ಉಲ್ಲೇಖ (2) ರನ್ವಯ ಪ್ರಸ್ತಾಪಿತ ಪ್ರದೇಶಗಳನ್ನು 'ವಸತಿ' ಉದ್ದೇಶಕ್ಕಾಗಿ ಭೂ ಪರಿವರ್ತನೆ ಮಾಡುವ ಸಂಬಂಧ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

ಉಲ್ಲೇಖ (4) ರ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ, ಸಭೆಯ ಅನುಮೋದನೆಗೆ ಪರಿಗಣಿಸಲು ಕೈಗೊಂಡ ನಿರ್ಣಯದನ್ವಯ ಉಲ್ಲೇಖ (5) ರ ಈ ಪ್ರಾಧಿಕಾರದ ಪತ್ರದಲ್ಲಿ ಅರ್ಜಿದಾರರಿಗೆ ಶುಲ್ಕಗಳನ್ನು ಪಾವತಿಸಲು ತಿಳಿಸಲಾಗಿರುತ್ತದೆ.

ಉಲ್ಲೇಖ (6) ರಂತೆ ಅರ್ಜಿದಾರರು **ಈ** ಪ್ರಾಧಿಕಾರಕ್ಕೆ ಅಗತ್ಯ ಶುಲ್ಕಗಳನ್ನು ಪಾವತಿಸಿರುತ್ತಾರೆ. ಉಲ್ಲೇಖ (7) ರಲ್ಲಿ ದಿನಾಂಕ: 04-01-2018ರ ಪತ್ರದನ್ವಯ ಪ್ರಸ್ತಾವನೆಯಲ್ಲಿರುವ ಜಮೀನಿನ ಮಾಲೀಕರ ಪರವಾಗಿ ನೋಂದಾಯಿತ ಜಿ.ಪಿ.ಎ ಹಾಗೂ ಜಂಟಿ ಅಭಿವೃದ್ಧಿದಾರರಾದ SCIONI PROJECTS ಪರವಾಗಿ ಶ್ರೀ ಕೆ. ಶ್ರೀನಿವಾಸಲುರೆಡ್ಡಿ ಮತ್ತು ಶ್ರೀ ಮುದಿರೆಡ್ಡಿನಾಗ ಶಿವರೆಡ್ಡಿ ಇವರು ಜಮೀನಿನ ಮಾಲೀಕರಿಗೂ ಹಾಗೂ ಜಿಪಿಎ/ಜಂಟಿ ಅಭಿವೃದ್ಧಿದಾರರಿಗೆ ತಕಾರರು ಬಂದ ಕಾರಣ ವಿನ್ಯಾಸ ನಕ್ಷೆ ಪಡೆಯಲು ಸಾಧ್ಯವಾಗಿರುವುದಿಲ್ಲವೆಂದು ತಿಳಿಸುತ್ತಾ, ಜಮೀನಿನ ಮಾಲೀಕರಿಗೂ ಹಾಗೂ ಜಿಪಿಎ/ಜಂಟಿ ಅಭಿವೃದ್ಧಿದಾರರಿಗೂ ಈಗ ಯಾವುದೇ ಭಿನ್ನಭಿಪ್ರಾಯ ಇಲ್ಲದೇ ಇರುವುದರಿಂದ ಹಾಗೂ ಉಲ್ಲೇಖ (7) ರ ದಿನಾಂಕ: 27-03-2018 ರ ಮನವಿಯಂತೆ ಸದರಿ ಪ್ರಸ್ತಾವನೆಯಲ್ಲಿರುವ ಜಮೀನುಗಳ ಪೈಕಿ 61/4 ರಲ್ಲಿ 0ಎ-10 ಗು ಹೊರತು ಪಡಿಸಿ ಜಿಪಿಎ ಪಡೆದಿದ್ದು 61/4 ರಲ್ಲಿ 0ಎ-10ಗು ಜಮೀನು ಸೇರಿಸಿಕೊಂಡು ಅಭಿವೃದ್ಧಿಪಡಿಸುವ ಬಗ್ಗೆ ಜಮೀನಿನ ಮಾಲೀಕರು ಒಪ್ಪಿಕೊಂಡಿದ್ದು ಒಟ್ಟು 05ಎ-16ಗು ವಿಸ್ತೀರ್ಣ ಪ್ರದೇಶಕ್ಕೆ ವಸತಿ ವಿನ್ಯಾಸಕ್ಕೆ ಅನುಮೋದನೆ ನೀಡಲು ಕೋರಿರುತ್ತಾರೆ.

ಹಾಗಾಗಿ ಮೇಲ್ಕಂಡ ಅಂಶಗಳನ್ವಯ, **ಬೆಂಗಳೂರು ಜಿಲ್ಲೆ, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಹೆಸರಘಟ್ಟ ಹೋಬಳಿ, ಅದ್ದೆವಿಶ್ವನಾಥಪುರ ಗ್ರಾಮದ ಸರ್ವೆ ನಂ. 61/3 ರಲ್ಲಿ (3ಎ-10ಗು) ಮತ್ತು 61/4 ರಲ್ಲಿ (2ಎ) ಒಟ್ಟು <u>5ಎಕರೆ-16ಗುಂಟೆ</u>** ವಿಸ್ತೀರ್ಣ ಪ್ರದೇಶಕ್ಕೆ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ/157/ಬಿಎಂಆರ್/2005 ದಿನಾಂಕ: 27-01-2009 ಮತ್ತು ತಿದ್ದುಪಡಿ ಆದೇಶ ದಿನಾಂಕ: 29-01-2009 ರಲ್ಲಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅನುಮೋದನೆಗೊಂಡಿರುವ ಮಹಾಯೋಜನೆಯ ವಲಯ ನಿಯಮಾವಳಿಗಳನ್ವಯ ಮತ್ತು ಉಲ್ಲೇಖ (8) ರ ಸರ್ಕಾರದ ಅಧಿಸೂಚನೆಯಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 ಕ್ಕೆ ತಿದ್ದುಪಡಿಯಾಗಿದ್ದು, ಅದರಂತೆ 17(2) ರನ್ವಯ ವಸತಿ ವಿನ್ಯಾಸ ನಕ್ಷೆಗೆ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು **"ತಾತ್ಕಾಲಿಕ ಅನುಮೋದನೆ"** ನೀಡಲಾಗಿದೆ.

1. ಈ ವಿನ್ಯಾಸವನ್ನು ಅಭಿವೃದ್ಧಿಪಡಿಸಲು ಮಾತ್ರ ಅನುಮೋದನೆ ನೀಡಲಾಗಿದೆ.
2. ಅನುಮೋದನೆ ನೀಡಿದ ದಿನಾಂಕದಿಂದ ಎರಡು ವರ್ಷದೊಳಗೆ ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸತಕ್ಕದ್ದು. ತಪ್ಪಿದಲ್ಲಿ ತಾತ್ಕಾಲಿಕ ಅನುಮೋದನೆಯನ್ನು ನವೀಕರಿಸಿಕೊಳ್ಳತಕ್ಕದ್ದು.
3. ವಿನ್ಯಾಸದಲ್ಲಿ ಎಲ್ಲಾ ಸಿವಿಲ್ ಕಾಮಗಾರಿಗಳಾದ ರಸ್ತೆ, ಚರಂಡಿ, ಒಳಚರಂಡಿ, ನೀರಿನ ಸಂಪರ್ಕ ಹಾಗೂ ಇತರೆ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಲೋಕೋಪಯೋಗಿ ಒಳನಾಡು ಬಂದರು ಮತ್ತು ಜಲಸಾರಿಗೆ ಇಲಾಖೆ, ತೋಟಗಾರಿಕೆ ಇಲಾಖೆ, ಬೆಸ್ಕಾಂ, ಕರ್ನಾಟಕ ನಗರ ನೀರು ಸರಬರಾಜು ಒಳಚರಂಡಿ ಮಂಡಳಿ (KUWSDB) ಮತ್ತು ಸ್ಥಳೀಯ ಸಂಸ್ಥೆಯಿಂದ ದೃಢೀಕರಣ ಪತ್ರ ಪಡೆದು ಸಲ್ಲಿಸತಕ್ಕದ್ದು.
4. ವಿನ್ಯಾಸದಲ್ಲಿ ಕಾಯ್ದಿರಿಸಿರುವ ಉದ್ಯಾನವನ ಪ್ರದೇಶಕ್ಕೆ Chain Link Fencing ಅಳವಡಿಸಿ ಉದ್ಯಾನವನವನ್ನು ಅಭಿವೃದ್ಧಿಪಡಿಸಿ ತೋಟಗಾರಿಕೆ ಇಲಾಖೆಯಿಂದ ದೃಢೀಕರಣ ಪತ್ರ ಸಲ್ಲಿಸತಕ್ಕದ್ದು ಹಾಗೂ ನಾಗರೀಕ ಸೌಲಭ್ಯ ನಿವೇಶನಕ್ಕೂ ಸಹ Chain Link Fencing ಅನ್ನು ಅಳವಡಿಸಿ ಸಂರಕ್ಷಿಸತಕ್ಕದ್ದು. ನಾಗರೀಕ ಸೌಲಭ್ಯದ ಪ್ರದೇಶವನ್ನು ಈ ಪ್ರಾಧಿಕಾರಕ್ಕೆ ಹಾಗೂ ಉದ್ಯಾನವನ ಮತ್ತು ರಸ್ತೆ

☎ Ph : 2768 3377
**ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ**
ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.
ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.in

ಜಾಗಗಳನ್ನು ಸ್ಥಳೀಯ ಸಂಸ್ಥೆಗೆ ನೋಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ಮುಕ್ತಟೆಯಾಗಿ ಅಂತಿಮ ವಿನ್ಯಾಸ ಅನುಮೋದನೆ ಪೂರ್ವದಲ್ಲಿ ಹಸ್ತಾಂತರಿಸುವ ಷರತ್ತುಗೊಳಪಟ್ಟಿರುತ್ತದೆ.

5. ಪ್ರಸ್ತಾಪಿತ ವಿನ್ಯಾಸದಲ್ಲಿ ಸೂಕ್ತವಾದ ಕಡೆ ಪ್ರಮಾಣೀಕೃತ ರೀತಿಯ ಒಳಚರಂಡಿ ನೀರು ಶುದ್ಧೀಕರಣ ಘಟಕ (STP) ವನ್ನು ವಿನ್ಯಾಸದಲ್ಲಿ ನಿರ್ಮಾಣ ಮಾಡಿ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯಿಂದ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.
6. ಈ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು.
7. ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡೂ ಕಡೆ ಹಾಗೂ ಉದ್ಯಾನವನಗಳಲ್ಲಿ ಹೊಸ ಸಸಿಗಳನ್ನು ಬೆಳೆಸುವುದು.
8. ಅನುಮೋದಿತ ವಿನ್ಯಾಸದ ಸೂಕ್ತ ಸ್ಥಳಗಳಲ್ಲಿ (RWH) ಮಳೆ ನೀರು ಸಂಗ್ರಹಣೆ ಪದ್ಧತಿಯನ್ನು ಕಡ್ಡಾಯವಾಗಿ ಅಳವಡಿಸಿ ಅಂತರ್ ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
9. ಅನುಮೋದಿತ ವಿನ್ಯಾಸದಲ್ಲಿರುವ ರಸ್ತೆಗಳು, ಉದ್ಯಾನವನವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಈ ಪ್ರಾಧಿಕಾರದಿಂದ ತಿಳಿಸುವವರೆಗೆ ನಿರ್ವಹಣೆಯನ್ನು ಮಾಡತಕ್ಕದ್ದು ಹಾಗೂ ಸಾರ್ವಜನಿಕ ಸೌಲಭ್ಯಕ್ಕೆ ಕಾಯ್ದಿರಿಸಿದ ನಿವೇಶನವನ್ನು ಒತ್ತುವರಿಯಾಗದಂತೆ ಸಂರಕ್ಷಿಸತಕ್ಕದ್ದು.
10. ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ-ಪಕ್ಕದ ಜಮೀನುಗಳಿಗೆ ಇರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.
11. ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ವಿಧಿ 17 (4) ರಂತೆ ಕ್ರಮ ಜರುಗಿಸಲಾಗುವುದು.
12. ಪ್ರಸ್ತಾಪಿತ ಜಮೀನಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.
13. ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲೀನ ನೀರನ್ನು ಬಿಡಬಾರದು.
14. ಈ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಪ್ರದೇಶದಲ್ಲಿ ಬರುವ 'ಬಿ' ಖರಾಬು ಜಮೀನುಗಳು ಸರ್ಕಾರಕ್ಕೆ ಸೇರಿರುತ್ತದೆ. ಈ ಜಮೀನುಗಳನ್ನು ಯಥಾಸ್ಥಿತಿಯಂತೆ ಕಾಪಾಡತಕ್ಕದ್ದು ಹಾಗೂ ಅತಿಕ್ರಮಣ ಮಾಡಬಾರದು ಮತ್ತು ಇತರೆ ಉದ್ದೇಶಗಳಿಗಾಗಿ ಉಪಯೋಗಿಸತಕ್ಕದ್ದಲ್ಲ.
15. ಸದರಿ ವಿನ್ಯಾಸದಲ್ಲಿನ ರಸ್ತೆ, ಪಾದಚಾರಿ ಮಾರ್ಗ ಹಾಗೂ ಉದ್ಯಾನವನಗಳು ಸಾರ್ವಜನಿಕ ಸ್ವತ್ತಾಗಿರುತ್ತದೆ. ಆದ್ದರಿಂದ ಸಾರ್ವಜನಿಕ ಸ್ವತ್ತುಗಳನ್ನು ಮುಕ್ತವಾಗಿಡತಕ್ಕದ್ದು.
16. ಆರ್ಥಿಕವಾಗಿರುವ ದುರ್ಬಲರಾಗಿರುವ ಮತ್ತು ಕಡಿಮೆ ಆದಾಯದ ವರ್ಗದವರಿಗೆ ನಿವೇಶನ ಹಾಗೂ ಮನೆಗಳನ್ನು ಮೀಸಲಿಡುವ ಕುರಿತು ದಾಖಲಾಗಿರುವ ರಿಟ್ ಪಿಟಿಷನ್ ಸಂಖ್ಯೆ :9800/2015(LB-RES) ಗೆ ಸಂಬಂಧಿಸಿದಂತೆ ನ್ಯಾಯಾಲಯವು ಹೊರಡಿಸುವ ಅಂತಿಮ ತೀರ್ಪಿಗೆ ಬದ್ಧರಾಗಿರತಕ್ಕದ್ದು.
17. ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಇಲಾಖೆಗಳು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಪ್ರಾಧಿಕಾರದಿಂದ ನೀಡಿದ ಅನುಮೋದನೆಯು ಯಾವ ಪೂರ್ವ ಸೂಚನೆಯು ಇಲ್ಲದೇ ತಂತಾನೇ ರದ್ದಾಗುತ್ತದೆ.

ಅರ್ಜಿದಾರರು ವಿನ್ಯಾಸದಲ್ಲಿನ ಕಾಮಗಾರಿಗಳನ್ನು ಅಭಿವೃದ್ಧಿಪಡಿಸಿದ ನಂತರ, ವಿನ್ಯಾಸದಲ್ಲಿನ ಉದ್ಯಾನವನ ಬಯಲು ಪ್ರದೇಶ ಹಾಗೂ ರಸ್ತೆಗಳನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗೆ ಹಾಗೂ ನಾಗರೀಕ ಸೌಲಭ್ಯ ನಿವೇಶನವನ್ನು ಈ ಪ್ರಾಧಿಕಾರಕ್ಕೆ ನೋಂದಾಯಿತ ಪರಿತ್ಯಜನಾ ಪತ್ರಗಳ ಮುಖಾಂತರ ಹಸ್ತಾಂತರಿಸಿ, ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ವಿವಿಧ ಇಲಾಖೆಗಳಿಂದ ಅಂದರೆ ರಸ್ತೆ ಮತ್ತು ಮಳೆ ನೀರು ಚರಂಡಿ ಅಭಿವೃದ್ಧಿಪಡಿಸಿರುವ ಬಗ್ಗೆ ಲೋಕೋಪಯೋಗಿ ಇಲಾಖೆಯಿಂದ, ವಿದ್ಯುತ್ ಸರಬರಾಜು ಮಾಡಿರುವ ಬಗ್ಗೆ ಬೆಸ್ಕಾಂನಿಂದ, ಉದ್ಯಾನವನ ಅಭಿವೃದ್ಧಿಪಡಿಸಿರುವ ಬಗ್ಗೆ ತೋಟಗಾರಿಕೆ ಇಲಾಖೆಯಿಂದ ಮತ್ತು ನೀರು ಸರಬರಾಜು ಮತ್ತು ಒಳಚರಂಡಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (KUWSDB) ಇಲಾಖೆಯಿಂದ ಹಾಗೂ ವಿನ್ಯಾಸದಲ್ಲಿ ಮೂಲಭೂತ ಸೌಲಭ್ಯಗಳು ಮತ್ತು ಸಾರ್ವಜನಿಕ ಪ್ರದೇಶಗಳ ನಿರ್ವಹಣೆ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ಕಾಮಗಾರಿ ಮುಕ್ತಾಯ ಪತ್ರವನ್ನು ಪಡೆದು ಸಲ್ಲಿಸಿ, ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ಹಾಗೂ ನಿವೇಶನ ಬಿಡುಗಡೆಗೆ ಮನವಿ ಸಲ್ಲಿಸತಕ್ಕದ್ದು.

03.04.2018

**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ**
**ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ,**
ಬೆಂಗಳೂರು ಅಂತರ ರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ

*ಇವರಿಗೆ :*

1) **ಶ್ರೀಮತಿ/ಶ್ರೀಯುತರುಗಳಾದ ಎನ್. ವೆಂಕಟಾಚಲಯ್ಯ ಬಿನ್ ಲೇಟ್॥ ಎನ್.ನಾರಾಯಣಪ್ಪ, ಆರ್.ವಿ.ಆತ್ಮರಾಮಯ್ಯ ಮತ್ತು ಆರ್.ವಿ. ಶ್ರೀನಿವಾಸಮೂರ್ತಿ, ಆರ್.ವಿ.ನಾರಾಯಣಸ್ವಾಮಿ, ಆರ್.ವಿ.ಮಂಜುನಾಥ ಬಿನ್ ಎನ್. ವೆಂಕಟಾಚಲಯ್ಯ ರವರ ಪರವಾಗಿ ಜಿಪಿಎ ದಾರರಾದ ಮೆ॥ SCIONI PROJECTS ಪರವಾಗಿ ಶ್ರೀ ಕೆ. ಶ್ರೀನಿವಾಸಲು ರೆಡ್ಡಿ ಮತ್ತು ಶ್ರೀ ಮುದಿರೆಡ್ಡಿನಾಗ ಶಿವರೆಡ್ಡಿ**
   ನಂ: 544, 2ನೇ ಹಂತ, 4ನೇ ಕ್ರಾಸ್, 4ನೇ ಮೈನ್ ರೋಡ್,
   2ನೇ ಬ್ಲಾಕ್, ಆರ್.ಟಿ.ನಗರ. ಬೆಂಗಳೂರು.

2) **ಶ್ರೀಮತಿ/ಶ್ರೀಯುತರುಗಳಾದ, ಶ್ರೀ ಎನ್.ವೆಂಕಟಾಚಲಯ್ಯ ಮತ್ತು ಇತರರು**
   ಅದ್ದೆವಿಶ್ವನಾಥಪುರ ಗ್ರಾಮ, ಹೆಸರಘಟ್ಟ ಹೋಬಳಿ,
   ಬೆಂಗಳೂರು ಉತ್ತರ ತಾಲ್ಲೂಕು.

**ಪ್ರತಿಯನ್ನು:-**

1) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ರಾಜಾನುಕುಂಟೆ ಗ್ರಾಮ ಪಂಚಾಯಿತಿ ಬೆಂಗಳೂರು ಉತ್ತರ ತಾಲ್ಲೂಕು, ಇವರಿಗೆ ತಾತ್ಕಾಲಿಕ ಅನುಮೋದನೆ ವಸತಿ ವಿನ್ಯಾಸ ನಕ್ಷೆಯನ್ನು ಕಳುಹಿಸುತ್ತಾ, ಸದರಿ ವಸತಿ ವಿನ್ಯಾಸಕ್ಕೆ ಈ ಪ್ರಾಧಿಕಾರದಿಂದ ಅಂತಿಮ ಅನುಮೋದನೆ ನೀಡುವವರೆಗೂ ಯಾವುದೇ ನಿವೇಶನಗಳಿಗೆ ಖಾತಾ ನೋಂದಾಣಿ ಮಾಡಬಾರದೆಂದು ಈ ಮೂಲಕ ತಿಳಿಸಿದೆ.
2) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಯಲಹಂಕ ಇವರಿಗೆ ಅನುಮೋದನೆ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.

✆ Ph. : 27682035

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ವಿ.ಜಿ. ಕಾಂಪ್ಲೆಕ್ಸ್, 1ನೇ ಮಹಡಿ, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.
ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.in

3) ಸಹಾಯಕ ಕಾರ್ಯಪಾಲಕ ಅಭಿಯಂತರರು ಲೋಕೋಪಯೋಗಿ ಮತ್ತು ಬಂದರು ಇಲಾಖೆ ಬೆಂಗಳೂರು ಉತ್ತರ ತಾಲ್ಲೂಕು ಇವರಿಗೆ ಅನುಮೋದನೆ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
4) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ತೋಟಗಾರಿಕೆ ಇಲಾಖೆ (ಜಿಲ್ಲಾ ಪಂಚಾಯತ್) ಯಲಹಂಕ, ಬೆಂಗಳೂರು ಉತ್ತರ ತಾಲ್ಲೂಕು ಇವರಿಗೆ ಅನುಮೋದನೆ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (KUWSDB), ಜಲಭವನ, 1ನೇ ಹಂತ, 1ನೇ ಪೇಸ್, ಬಿ.ಟಿ.ಎಂ ಬಡಾವಣೆ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029. ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
6) ಕಚೇರಿ ಕಡತಕ್ಕೆ.